# ಕರ್ನಾಟಕ ಲೋಕಸೇವಾ ಆಯೋಗ

## ಉದ್ಯೋಗಸೌಧ, ಬೆಂಗಳೂರು – 560001

### ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ ಉಳಿಕೆ ಮೂಲ ವೃಂದದ 48

### "ಸಹಾಯಕ ನಿಯಂತ್ರಕರು " - ಸಮೂಹ 'ಎ' ಹುದ್ದೆಗಳ ನೇಮಕಾತಿ

## ಅಧಿಸೂಚನೆ




ಅಂತರ್ಜಾಲhttp://kpsc.kar.nic.in : ಇ-ಮೇಲ್:kpsc-ka@nic.in

# ಪರಿವಿಡಿ


| ಕ್ರಮ ಸಂಖ್ಯೆ | ವಿಷಯವಾರು ವಿವರ | ಪುಟ ಸಂಖ್ಯೆ |
|---|---|---|
| 01 | **ಅಧಿಸೂಚಿಸಲಾದ ಹುದ್ದೆಯ ಹೆಸರು ಹಾಗೂ ನಿಯಮ** | **03** |
| 02 | ಅರ್ಜಿ ಸಲ್ಲಿಸುವಿಕೆ/ ಶುಲ್ಕ ಸ್ವೀಕೃತಿ ಕಾಲಮಿತಿ | **03** |
| 03 | ಅರ್ಜಿ ಸಲ್ಲಿಸುವ ಹಂತಗಳು/ ಅರ್ಜಿ ಸಲ್ಲಿಸುವ ಪ್ರಕ್ರಿಯೆ | **04** |
| 04 | ಶುಲ್ಕ ಪಾವತಿ | **05** |
| 05 | ಅರ್ಹತಾ ಷರತ್ತುಗಳು | **06** |
| 06 | ಶೈಕ್ಷಣಿಕವಿದ್ಯಾರ್ಹತೆ | **6-7** |
| 07 | ವಯೋಮಿತಿ | **7-8** |
| 08 | ಹುದ್ದೆಗಳ ವರ್ಗೀಕರಣ | **8** |
| 09 | ನೇಮಕಾತಿ ವಿಧಾನ | **9-12** |
| 10 | ಮೀಸಲಾತಿ/ ಇತರೆ ಪ್ರಮಾಣ ಪತ್ರಗಳು | **12-16** |
| 11 | ಆಯೋಗದೊಡನೆ ಪತ್ರ ವ್ಯವಹಾರ | **17** |
| 12 | ಪ್ರಾಮುಖ್ಯವಾದ ಸೂಚನೆಗಳು | **17-18** |
| 13 | ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು | **18** |
| 14 | ದುರ್ನಡತೆ | **18** |
| 15 | ಅನುಬಂಧ-1 ಅಭ್ಯರ್ಥಿಗಳಿಗೆಆನ್ ಲೈನ್ ಅರ್ಜಿ ಭರ್ತಿ ಮಾಡುವ ಬಗ್ಗೆ ಸೂಚನೆಗಳು | **19-20** |
| 16 | ಅನುಬಂಧ-2 –ವಿವಿಧ ಪ್ರಮಾಣ ಪತ್ರಗಳ ನಮೂನೆಗಳು | **20-29** |

# ಕರ್ನಾಟಕ ಲೋಕಸೇವಾ ಆಯೋಗ

"ಉದ್ಯೋಗ ಸೌಧ" ಬೆಂಗಳೂರು-560 001.

ಸಂಖ್ಯೆ: ಪಿಎಸ್ ಸಿ/ಇ(1) ಎಸ್ಎ ಡಿ(ಎಸಿ)-1(ಆರ್ ಪಿಸಿ)/ 2020 **ದಿನಾಂಕ: 31–01–2020**

**ಜಾರಿ ಸಂಖ್ಯೆ: ಇ(1) 3038/2019-20/ಪಿಎಸ್ಸಿ.**

## ಅಧಿಸೂಚನೆ

ಕರ್ನಾಟಕ ರಾಜ್ಯ ಲೆಕ್ಕ ಪತ್ರ ಸೇವೆಗಳು (ನೇಮಕಾತಿ) ನಿಯಮಗಳು 2011 ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖಾ ಸೇವೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 2015ಗಳನ್ವಯ ಹಾಗೂ ಕಾಲಕಾಲಕ್ಕೆ ತಿದ್ದುಪಡಿಯಾದ ಇತರೆ ನಿಯಮಗಳಡಿಯಲ್ಲಿ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದದ 48 "ಸಹಾಯಕ ನಿಯಂತ್ರಕರು ಸಮೂಹ 'ಎ' (ವೇತನ ಶ್ರೇಣಿ 52650-97100) ಹುದ್ದೆಗಳನ್ನು ಭರ್ತಿ ಮಾಡಲು ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

ಪ್ರಸ್ತುತ ನಿಯಮಗಳಿಗೊಳಪಟ್ಟಂತೆ ಸ್ಪರ್ಧಾತ್ಮಕ ಪರೀಕ್ಷೆಯ ನಡೆಸುವಿಕೆಯು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು 1997ರ ನಿಯಮ (5) ಮತ್ತು (7) ಅನ್ನು ಯಥಾವತ್ತಾಗಿ ಅನ್ವಯಿಸುತ್ತದೆ.

2) ಅರ್ಜಿ ಸಲ್ಲಿಸುವಿಕೆ/ ಶುಲ್ಕ ಸ್ವೀಕೃತಿ ಕಾಲಮಿತಿ :

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 06-02-2020 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 06-03-2020 |
| ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕ | 07-03-2020 |
| ಪೂರ್ವಭಾವಿ ಪರೀಕ್ಷಾ ದಿನಾಂಕ | 24-05-2020 |
| ಮುಖ್ಯ ಪರೀಕ್ಷಾ ದಿನಾಂಕ | 2020 ರ ಆಗಸ್ಟ್ / ಸೆಪ್ಟೆಂಬರ್ ಮಾಹೆಯಲ್ಲಿ ನಡೆಸಲಾಗುವುದು (ದಿನಾಂಕವನ್ನು ನಂತರದಲ್ಲಿ ತಿಳಿಸಲಾಗುವುದು) |

ವಿಶೇಷ ಸೂಚನೆ:- ಅಭ್ಯರ್ಥಿಗಳು ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ಪೂರ್ವಭಾವಿ ಪರೀಕ್ಷೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:06-03-2020 ರೊಳಗೆ ಅಧಿಸೂಚನೆಯ ಅನುಬಂಧ-2ರಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡಿರತಕ್ಕದ್ದು.

2.1) ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ಯಾವುದೇ ಕಾಮನ್ ಸರ್ವೀಸ್ ಸೆಂಟರ್ ಗಳಲ್ಲಿ (CSC) ಅಥವಾ ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್ ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದೇ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ /ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಶುಲ್ಕವನ್ನು ಕಾಮನ್ ಸರ್ವೀಸ್ ಸೆಂಟರ್ ಗಳಲ್ಲಿ (CSC) ಪಾವತಿಸಲು ಅವಕಾಶ ನೀಡಲಾಗಿರುವುದರಿಂದ ಅರ್ಜಿಗಳನ್ನು ಇಲ್ಲಿಯೂ ಸಹ ಸಲ್ಲಿಸಬಹುದಾಗಿದೆ.

3) ಅರ್ಜಿ ಸಲ್ಲಿಸುವ ಪ್ರಕ್ರಿಯೆ

ಅರ್ಜಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ಮೂರು ಹಂತಗಳು ಇದೆ.

1. ಮೊದಲನೇ ಹಂತ: Profile Creation/Updation
2. ಎರಡನೇ ಹಂತ : Application Submission
3. ಮೂರನೇ ಹಂತ : Fees Payment through My Application section

ವಿವರವಾದ ಹಂತಗಳು:

{'*' Marks are mandatory/ ಗುರುತು ಇರುವ ಅಂಕಣಗಳು ಕಡ್ಡಾಯವಾಗಿ ಭರ್ತಿ ಮಾಡಬೇಕು)
If no response found on Save/Add button kindly refresh page (press control +F5)}

- ಹೊಸದಾಗಿ Application Link ರಲ್ಲಿ log in ಆಗಲು user name ಮತ್ತು password ಅನ್ನು ಸೃಷ್ಟಿಸಬೇಕು.
- Application Link ರಲ್ಲಿ log in ಆದ ನಂತರ ನಿಮ್ಮ ಪೂರ್ಣ profile ಅನ್ನು ಭರ್ತಿ ಮಾಡಿ.
- ಅಪ್ಲೋಡ್ ಮಾಡಬೇಕಾದ ಭಾವಚಿತ್ರ ಮತ್ತು ಸಹಿ ಸ್ಕ್ಯಾನ ಪ್ರತಿಗಳನ್ನು jpg ನಮೂನೆಯಲ್ಲಿ ಸಿದ್ದವಾಗಿರಬೇಕು ಹಾಗೂ 50 kb ಗಿಂತ ಹೆಚ್ಚಾಗಿರಬಾರದು.
- ಅಧಿಸೂಚನೆ ಎದುರು ಇರುವ "Click here to Apply" Link ಅನ್ನು ಒತ್ತಿ.
- ನಿಮ್ಮ profile ರಲ್ಲಿ ಲಭ್ಯವಿರುವ ಮಾಹಿತಿಯು ನಿಮ್ಮ ಅರ್ಜಿ ನಮೂನೆಯಲ್ಲಿ ಪ್ರಕಟವಾಗುತ್ತದೆ. ಅರ್ಜಿಯಲ್ಲಿ ಬಾಕಿ ಉಳಿದಿರುವ ಮಾಹಿತಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು.
- ಅರ್ಜಿ ಸಲ್ಲಿಸಿದ ನಂತರ "My Application" link ರಲ್ಲಿ ನೀವು ಅರ್ಜಿ ಸಲ್ಲಿಸಿರುವ ಅಧಿಸೂಚನೆಯನ್ನು ಆಯ್ಕೆ ಮಾಡಿದಲ್ಲಿ ಕೆಳಗೆ ನಿಮ್ಮ ಅರ್ಜಿಯು ಪ್ರಕಟವಾಗುತ್ತದೆ.
- ಅರ್ಜಿಯ ಪಕ್ಕದಲ್ಲಿ "Pay Now" link ಅನ್ನು ಒತ್ತಿದಲ್ಲಿ "Online payment" ಆಯ್ಕೆಗಳು ಮೂಡುತ್ತವೆ.

ಒಂದು ಬಾರಿ ನೋಂದಣಿ/ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆಗಳು ಉಂಟಾದಲ್ಲಿ ಸಹಾಯವಾಣಿ ಸಂಖ್ಯೆ: 7406086807 / 7406086801 ಯನ್ನು ಸಂಪರ್ಕಿಸಲು ಸೂಚಿಸಿದೆ.

3.1) ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡುವ ಮೊದಲು ಅಧಿಸೂಚನೆಯಲ್ಲಿನ ಅನುಬಂಧ-1 ರಲ್ಲಿ ನೀಡಿರುವ ಅರ್ಜಿ ಭರ್ತಿ ಮಾಡುವ ಕುರಿತ ಸೂಚನೆಗಳು, ಅರ್ಹತಾ ಷರತ್ತುಗಳನ್ನು ಓದಿಕೊಳ್ಳತಕ್ಕದ್ದು. ಅರ್ಜಿಯಲ್ಲಿ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ.-1 | ಪ್ರವರ್ಗ-1 | Cat–1 | Category – I |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ **ಅಭ್ಯರ್ಥಿ** | PH | Physically Handicapped |
| ಆರ್ ಪಿ ಸಿ | ಉಳಿಕೆ ಮೂಲ ವೃಂದ | RPC | Residual Parent Cadre |
| ಹೈ.ಕ. | ಹೈದರಾಬಾದ್-ಕರ್ನಾಟಕ ಸ್ಥಳೀಯ ವೃಂದ | **HK** | Hyderabad-Karnataka Local Cadre |

4. <u>ಶುಲ್ಕ</u>:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.600/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ,ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. |

<u>ವಿಶೇಷ ಸೂಚನೆ:-</u> ರೂ. 35/- ರ ಪ್ರಕ್ರಿಯೆ ಶುಲ್ಕ (processing fees)ವನ್ನು ಎಲ್ಲಾ ಅಭ್ಯರ್ಥಿಗಳು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಮಾಜಿ ಸೈನಿಕ ಹಾಗೂ ಅಂಗವಿಕಲ ಅಭ್ಯರ್ಥಿಗಳು ಸೇರಿದಂತೆ ) ಕಡ್ಡಾಯವಾಗಿ ಪಾವತಿಸ ತಕ್ಕದ್ದು. ಪಾವತಿಸದಿದ್ದಲ್ಲಿ, ನಿಮ್ಮ **ಅರ್ಜಿಯನ್ನು** ತಿರಸ್ಕರಿಸಲಾಗುವುದು.

4.1 ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನುಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

5. ಅರ್ಹತಾ ಷರತ್ತುಗಳು:-

| | |
|---|---|
| ಅ) | ಭಾರತೀಯ ನಾಗರೀಕನಾಗಿರತಕ್ಕದ್ದು. |
| ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು. |
| ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |

5.1 ಶೈಕ್ಷಣಿಕ ವಿದ್ಯಾರ್ಹತೆ :-

| | |
|---|---|
| ಭಾರತ ಸರ್ಕಾರದ ಕಾನೂನು ರೀತ್ಯಾ ಸ್ಥಾಪಿಸಲ್ಪಟ್ಟಿರುವ ವಿಶ್ವವಿದ್ಯಾಲಯದಿಂದ ವಾಣಿಜ್ಯ ಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ (ಎಂ.ಕಾಂ.) ಅಥವಾ ಎಂ.ಬಿ.ಎ. (ಆರ್ಥಿಕ) ಅಥವಾ ಎಂ.ಬಿ.ಎ. (ಆರ್ಥಿಕ ನಿರ್ವಾಹಣೆ) ಅಥವಾ ಎಂ.ಬಿ.ಎ./ ಎಂ.ಕಾಂ (ಅಂತರರಾಷ್ಟ್ರೀಯ ವ್ಯವಹಾರ) ಅಥವಾ ಎಂ.ಬಿ.ಎ./ ಎಂ.ಕಾಂ (ಆರ್ಥಿಕ ವಿಶ್ಲೇಷಣೆ) ಅಥವಾ ಯು.ಜಿ.ಸಿ ಯು ಮೇಲ್ಕಂಡ ಸ್ನಾತಕೋತ್ತರ ಪದವಿಗೆ ತತ್ಸಮಾನವೆಂದು ಪರಿಗಣಿಸಿ ಅಧಿಸೂಚಿಸಿರುವ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು ಅಥವಾ ಫೆಲೋ ಆಫ್ ಚಾರ್ಟಡ್ ಅಕೌಂಟೆಂಟ್ಸ್ ಅಥವಾ ಐ.ಸಿ.ಡಬ್ಲ್ಯೂ.ಎ. (I.C.W.A) ಹೊಂದಿರತಕ್ಕದ್ದು.<br><br>ಪರಂತು, ಅಭ್ಯರ್ಥಿಗಳು ಮೇಲ್ಕಂಡ ಯಾವುದಾದರೂ ಪರೀಕ್ಷೆಗೆ ಹಾಜರಾಗಿದ್ದಲ್ಲಿ ಮತ್ತು ಆ ಪರೀಕ್ಷೆಯಲ್ಲಿ | Must be a holder of Master's degree in Commerce (M.Com.) or must be holder of M.B.A (Finance)/or M.B.A (Financial Management) or M.B.A/M.Com(International Business ) or M.B.A./M.Com(Financial Analysis) or any other Master's degree notified by UGC as equivalent to the above qualifications from a University established by law in India or a Fellow of Chartered Accountants or I.C.W.A .<br><br>Provided that, candidates who have appeared for an examination, passing of which would render them educationally qualified for preliminary examination |

| | |
|---|---|
| ಉತ್ತೀರ್ಣರಾದಲ್ಲಿ ಆಯೋಗವು ನಡೆಸುವ ಪೂರ್ವಭಾವಿ ಪರೀಕ್ಷೆಗೆ ಶೈಕ್ಷಣಿಕವಾಗಿ ಅರ್ಹರಾಗುವುದಾದಲ್ಲಿ, ಆದರೆ ಆ ಪರೀಕ್ಷೆಯ ಫಲಿತಾಂಶ ಪ್ರಕಟಗೊಳ್ಳದೇ ಇದ್ದಲ್ಲಿ, ಅಂತಹ ಅಭ್ಯರ್ಥಿಗಳು ಪೂರ್ವಭಾವಿ ಪರೀಕ್ಷೆಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.<br><br>ಮುಖ್ಯ ಪರೀಕ್ಷೆಯನ್ನು ತೆಗೆದುಕೊಳ್ಳಬಹುದೆಂದು ಆಯೋಗವು ಘೋಷಿಸಿದ ಅರ್ಹರಾದ ಎಲ್ಲಾ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗೆ ಅರ್ಜಿ ಸಲ್ಲಿಸುವಾಗ ಸಂಬಂಧಿಸಿದ ವಿದ್ಯಾರ್ಹತಾ ಪರೀಕ್ಷೆಯನ್ನು ಪಾಸು ಮಾಡಿರುವ ಬಗ್ಗೆ ಪ್ರಮಾಣ ಪತ್ರವನ್ನು ಅಪ್ಲೋಡ್ ಮಾಡತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳಿಗೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡುವುದಿಲ್ಲ | conducted by the Commission, but the results of which have not been declared, are also eligible for admission to such preliminary examination.<br><br>All candidates who are declared qualified by the Commission for taking the Main Examination shall be required to upload proof of passing the requisite Examination along with their application of the Main examination failing which such candidates shall not be admitted to the Main examination. |

## 5.2 ವಯೋಮಿತಿ:-

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಿರಬಾರದು:

| | | | |
|---|---|---|---|
| ಕನಿಷ್ಠ | | 21 ವರ್ಷ | 06-03-1999 ರ ಮೊದಲು ಜನಿಸಿರಬೇಕು |
| ಗರಿಷ್ಠ | 1. ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳಿಗೆ | 35 ವರ್ಷಗಳು | 06-03-1985 ರ ನಂತರ ಜನಿಸಿರಬೇಕು |
| | 2. ಪ್ರವರ್ಗ 2ಎ/2ಬಿ/3ಎ/3ಬಿ ಅಭ್ಯರ್ಥಿಗಳಿಗೆ | 38 ವರ್ಷಗಳು | 06-03-1982 ರ ನಂತರ ಜನಿಸಿರಬೇಕು |
| | 3. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1 ಅಭ್ಯರ್ಥಿಗಳಿಗೆ | 40 ವರ್ಷಗಳು | 06-03-1980 ರ ನಂತರ ಜನಿಸಿರಬೇಕು |

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು

| | |
|---|---|
| (ಅ) ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. |
| (ಆ) ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಇ) ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |

6. ಹುದ್ದೆಗಳ ವರ್ಗೀಕರಣ: ಸರ್ಕಾರ ದೃಢೀಕರಿಸಿ ನೀಡಿರುವ ಹುದ್ದೆಗಳ ವರ್ಗೀಕರಣವನ್ನು ಈ ಕೆಳಕಂಡಂತಿದ್ದು, ತಿಳಿಸಿರುವ ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ. ಸರ್ಕಾರವು ಹೆಚ್ಚುವರಿ ಹುದ್ದೆಗಳನ್ನು ಬಿಡುಗಡೆ ಮಾಡಿದ್ದಲ್ಲಿ ಸೇರ್ಪಡೆ ಅಧಿಸೂಚನೆ ಮೂಲಕ ಅಧಿಸೂಚಿಸಿರುವ ಹುದ್ದೆಗಳಿಗೆ ಸೇರಿಸಿಕೊಳ್ಳಲಾಗುವುದು

ಗ್ರೂಪ್ - `ಎ' ಹುದ್ದೆಗಳು

**ಸಹಾಯಕ ನಿಯಂತ್ರಕರು/Assistant Controller- 48 posts**

ಉಳಿಕೆ ಮೂಲ ವೃಂದದ 48 ಹುದ್ದೆಗಳು

| ಮೀಸಲಾತಿ | ಇತರೆ | ಮಹಿಳ | ಗ್ರಾಮೀಣ | ಅಂ.ವಿ | ಮಾಸೈ | ಕಮಾಅ | ಒಟ್ಟು |
|---|---|---|---|---|---|---|---|
| ಪ.ಜಾ | 02 | 02 | 02 | - | 01 | - | 07 |
| ಪ.ಪಂ. | 01 | - | 01 | - | - | - | 02 |
| ಪ್ರ.1 | - | 01 | 01 | - | - | - | 02 |
| ಪ್ರ.2ಎ | 02 | 01 | 02 | - | 01 | - | 06 |
| ಪ್ರ.2ಬಿ | - | 01 | 01 | - | - | - | 02 |
| ಪ್ರ.3ಎ | 01 | 01 | - | - | - | - | 02 |
| ಪ್ರ.3ಬಿ | - | 01 | 01 | - | 01 | - | 03 |
| ಸಾ.ಅ | 04 | 08 | 07 | 01*<br>01 ** | 02 | 01 | 24 |
| ಒಟ್ಟು | 10 | 15 | 15 | 02 | 05 | 01 | 48 |

01* - 84ನೇ ಬಿಂದು ಚಲನವಲನ ವೈಕಲ್ಯ ಅಥವಾ ಮೆದುಳಿನ ಪಾರ್ಶ್ವವಾಯು(OA, OL, BL, OAL, BLOA)

01** - 4ನೇ ಬಿಂದು :ಶ್ರವಣದೋಷ/ಚಲನವಲನ ವೈಕಲ್ಯ ಅಥವಾ ಮೆದುಳಿನ ಪಾರ್ಶ್ವವಾಯು(OA, OL, BL, OAL, BLOA)

7. <u>ನೇಮಕಾತಿ ವಿಧಾನ:-</u>

ಸ್ಪರ್ಧಾತ್ಮಕ ಪರೀಕ್ಷೆಯು ಎರಡು ಹಂತಗಳನ್ನು ಒಳಗೊಂಡಿರುತ್ತದೆ. ಹೆಚ್ಚಿನ ವಿವರಗಳಿಗೆ ಆಯೋಗದ ವೆಬ್ ಸೈಟ್ ನಲ್ಲಿ ಬಿತ್ತರಿಸಿರುವ ನಿಯಮಗಳನ್ನು ನೋಡಲು ಸೂಚಿಸಿದೆ.

(1) ಪೂರ್ವಭಾವಿ ಪರೀಕ್ಷೆ:-(ವಸ್ತುನಿಷ್ಠ ಬಹು ಆಯ್ಕೆ ಮಾದರಿ) ಮುಖ್ಯ ಪರೀಕ್ಷೆಗೆ (Main examination) ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಲುವಾಗಿ

(2) ಮುಖ್ಯ ಪರೀಕ್ಷೆ:- (ಲಿಖಿತ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆ) ಅಭ್ಯರ್ಥಿಗಳನ್ನು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಗ್ರೂಪ್ - 'ಎ' ಮತ್ತು ಗ್ರೂಪ್ - 'ಬಿ' ಹುದ್ದೆಗಳಿಗೆ ಆಯ್ಕೆ ಮಾಡುವ ಸಲುವಾಗಿ.

<u>ಸೆಕ್ಷನ್ 'ಎ' - ಪೂರ್ವಭಾವಿ ಪರೀಕ್ಷೆ:-</u>

ಪೂರ್ವಭಾವಿ ಪರೀಕ್ಷೆಯು 02 ಪತ್ರಿಕೆಗಳನ್ನು ಒಳಗೊಂಡಿದ್ದು (ವಸ್ತುನಿಷ್ಠ ಬಹು ಆಯ್ಕೆ ಮಾದರಿ) ಪ್ರಶ್ನೆಗಳನ್ನು ಒಳಗೊಂಡಿರುತ್ತದೆ.

| ಪತ್ರಿಕೆ | ವಿಷಯ | ಗರಿಷ್ಠ ಅಂಕಗಳು | ಅವಧಿ | ಕಡ್ಡಾಯ/ಐಚ್ಛಿಕ |
|---|---|---|---|---|
| ಪತ್ರಿಕೆ-1 | ಸಾಮಾನ್ಯ ಅಧ್ಯಯನ | 150 | 2 ಗಂಟೆ | ಕಡ್ಡಾಯ |
| ಪತ್ರಿಕೆ-2 | ವಾಣಿಜ್ಯ ಶಾಸ್ತ್ರ ಮತ್ತು ನಿರ್ವಹಣೆ (ಗೆಜ಼ೆಟೆಡ್ ಪ್ರೊಬೇಷನರ್ಸ್ ಮುಖ್ಯ ಪರೀಕ್ಷೆಗೆ ನಿಗದಿಪಡಿಸಲಾದ ವಾಣಿಜ್ಯಶಾಸ್ತ್ರ (ಸಂಕೇತ-07) ಮತ್ತು ನಿರ್ವಹಣೆ (ಸಂಕೇತ-14) ಐಚ್ಛಿಕ ವಿಷಯಗಳ ಪಠ್ಯಕ್ರಮವನ್ನು ಒಳಗೊಂಡಿರುತ್ತದೆ) | 300 | 2 ಗಂಟೆ | ಕಡ್ಡಾಯ |
| ಒಟ್ಟು | | 450 | - | - |

<u>ಟಿಪ್ಪಣಿ:-</u>

(ಅ) ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳೆರಡರಲ್ಲೂ ಇರುತ್ತದೆ.

(ಆ) ಪೂರ್ವಭಾವಿ ಪರೀಕ್ಷೆಯಲ್ಲಿನ ಪ್ರಶ್ನೆಗಳ ಮಟ್ಟವು ಪದವಿ ಮಟ್ಟದ್ದಾಗಿರುತ್ತದೆ.

(ಇ) ಪ್ರತಿಯೊಂದು ಪತ್ರಿಕೆಯು 2 ಗಂಟೆಗಳ ಕಾಲಾವಧಿಯದ್ದಾಗಿರುತ್ತದೆ.

(ಈ) ಅಧಿಸೂಚನೆಯಲ್ಲಿ ಪ್ರಕಟಿತ ರಿಕ್ತ ಸ್ಥಾನಗಳಿಗೆ ಅನುಗುಣವಾಗಿ 20 ರಷ್ಟು ಪ್ರಮಾಣದಲ್ಲಿ ಜಾರಿಯಲ್ಲಿರುವ ಮೀಸಲಾತಿ ನೀತಿಯನ್ವಯ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳು ಮತ್ತು ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳನ್ನು ಅದೇ ಅನುಪಾತದಲ್ಲಿ ಅವರು ಪೂರ್ವಭಾವಿ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಮುಖ್ಯ ಪರೀಕ್ಷೆಗೆ ಪ್ರವೇಶ ನೀಡಲಾಗುತ್ತದೆ.

ಸೆಕ್ಷನ್ 'ಬಿ' – ಮುಖ್ಯ ಪರೀಕ್ಷೆ:-

ಮುಖ್ಯ ಪರೀಕ್ಷೆಯು ಲಿಖಿತ ಪರೀಕ್ಷೆ ಮತ್ತು ವ್ಯಕ್ತಿತ್ವ ಪರೀಕ್ಷೆಯನ್ನೊಳಗೊಂಡಿರುತ್ತದೆ.

ಲಿಖಿತ ಪರೀಕ್ಷೆ:-

| ಪತ್ರಿಕೆ | ವಿಷಯ | ಗರಿಷ್ಠ ಅಂಕಗಳು | ಅವಧಿ | ಕಡ್ಡಾಯ/ಐಚ್ಛಿಕ |
|---|---|---|---|---|
| ಪತ್ರಿಕೆ-1 | ಕನ್ನಡ | 150 | 3 ಗಂಟೆ | ಕಡ್ಡಾಯ |
| ಪತ್ರಿಕೆ-2 | ಇಂಗ್ಲೀಷ್ | 150 | 3 ಗಂಟೆ | ಕಡ್ಡಾಯ |
| ಪತ್ರಿಕೆ-3 | ಸಾಮಾನ್ಯ ಅಧ್ಯಯನ | 300 | 3 ಗಂಟೆ | ಕಡ್ಡಾಯ |
| ಪತ್ರಿಕೆ-4 | ಸಾಮಾನ್ಯ ಅಧ್ಯಯನ | 300 | 3 ಗಂಟೆ | ಕಡ್ಡಾಯ |
| ಪತ್ರಿಕೆ-5 | ಫೈನಾನ್ಶಿಯಲ್ ಅಕೌಂಟಿಂಗ್, ಮ್ಯಾನೇಜ್ ಮೆಂಟ್ ಅಂಡ್ ಅನಾಲಿಸಿಸ್ | 300 | 3 ಗಂಟೆ | ಕಡ್ಡಾಯ |
| ಪತ್ರಿಕೆ-6 | ಪ್ರಿನ್ಸಿಪಲ್ಸ್ ಆಫ್ ಮ್ಯಾನೇಜ್ ಮೆಂಟ್, ಆರ್ಗನೈಜೇಷನ್ ಬಿಹೇವಿಯರ್, ಟ್ರೈನಿಂಗ್ ಅಂಡ್ ಡೆವೆಲಪ್ ಮೆಂಟ್ | 300 | 3 ಗಂಟೆ | ಕಡ್ಡಾಯ |
| ಪತ್ರಿಕೆ-7 | ಕಾರ್ಪೋರೇಟ್ ಫೈನಾನ್ಸ್, ಬಿಸಿನೆಸ್ ಎಕಾನಮಿಕ್ ಅಂಡ್ ಟ್ಯಾಕ್ಸೇಷನ್ | 300 | 3 ಗಂಟೆ | ಕಡ್ಡಾಯ |
| ಪತ್ರಿಕೆ-8 | ಪ್ರಿನ್ಸಿಪಲ್ಸ್ ಅಂಡ್ ಪ್ರಾಕ್ಟೀಸ್ ಆಫ್ ಆಡಿಟಿಂಗ್, ಕಂಪ್ಯೂಟರ್ ಕಾನ್ಸೆಪ್ಟ್ಸ್ ಅಂಡ್ ಇ-ಕಾಮರ್ಸ್ | 300 | 3 ಗಂಟೆ | ಕಡ್ಡಾಯ |
| ಒಟ್ಟು | | 2100 | - | - |

ಟಿಪ್ಪಣಿ:-

(ಅ) ಕಡ್ಡಾಯ ಕನ್ನಡ ಮತ್ತು ಇಂಗ್ಲೀಷ್ ಪತ್ರಿಕೆಗಳಲ್ಲಿ ಪಡೆದ ಅಂಕಗಳು ಅರ್ಹತಾದಾಯಕ ಸ್ವರೂಪದ್ದಾಗಿರುತ್ತವೆ. ಅರ್ಹತೆ ಪಡೆಯಲು ಈ ಪ್ರತಿಯೊಂದು ಪತ್ರಿಕೆಯಲ್ಲಿ ಕನಿಷ್ಠ ಶೇಕಡ 30 ಮತ್ತು ಸರಾಸರಿ ಶೇಕಡ 35 ಅಂಕಗಳನ್ನು ನಿಗದಿಪಡಿಸಲಾಗಿದೆ. ಈ ಎರಡೂ ಪತ್ರಿಕೆಗಳಲ್ಲಿ ಗಳಿಸಿದ ಅಂಕಗಳನ್ನು ಅಭ್ಯರ್ಥಿಗಳ ಆಯ್ಕೆಯ ಅರ್ಹತೆಯನ್ನು ನಿಗದಿಪಡಿಸುವಲ್ಲಿ ಪರಿಗಣಿಸಲಾಗುವುದಿಲ್ಲ. ಈ ಎರಡು ಪತ್ರಿಕೆಗಳಲ್ಲಿ ನಿಗದಿತ ಅಂಕಗಳನ್ನು ಗಳಿಸದ ಅಭ್ಯರ್ಥಿಗಳು ಇತರೆ ಪತ್ರಿಕೆಗಳಲ್ಲಿ ಎಷ್ಟೇ ಹೆಚ್ಚು ಅಂಕಗಳನ್ನು ಗಳಿಸಿದ್ದರೂ ವ್ಯಕ್ತಿತ್ವ ಪರೀಕ್ಷೆಗೆ ಅರ್ಹರಾಗುವುದಿಲ್ಲ ಹಾಗೂ ಇಂತಹ ಅಭ್ಯರ್ಥಿಗಳ ಇತರೆ ವಿಷಯಗಳಲ್ಲಿ ಪಡೆದ ಅಂಕಗಳನ್ನು ಪ್ರಕಟಿಸುವುದಿಲ್ಲ.

(ಆ) ಮುಖ್ಯ ಪರೀಕ್ಷೆಯು ವಿವರಣಾತ್ಮಕ ಮಾದರಿಯಲ್ಲಿರುತ್ತದೆ.

(ಇ) ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳೆರಡರಲ್ಲೂ ಇರುತ್ತದೆ. ಅಭ್ಯರ್ಥಿಯು ಉತ್ತರಗಳನ್ನು ಪೂರ್ಣವಾಗಿ ಕನ್ನಡ ಅಥವಾ ಪೂರ್ಣವಾಗಿ ಇಂಗ್ಲೀಷ್ ನಲ್ಲಿ ಉತ್ತರಿಸತಕ್ಕದ್ದು.

(ಈ) ಮುಖ್ಯ ಪರೀಕ್ಷೆಯ ಪತ್ರಿಕೆ-(1) ಕಡ್ಡಾಯ ಕನ್ನಡ ಹಾಗೂ ಪತ್ರಿಕೆ-(2) ಕಡ್ಡಾಯ ಆಂಗ್ಲಭಾಷೆ ಪತ್ರಿಕೆಗಳು ಎಸ್.ಎಸ್.ಎಲ್.ಸಿ ಯ ಪ್ರಥಮ ಭಾಷೆಯ ಮಟ್ಟದ್ದಾಗಿರುತ್ತದೆ. ಮುಖ್ಯ ಪರೀಕ್ಷೆಯ ಇನ್ನಿತರ ವಿಷಯಗಳ ಪತ್ರಿಕೆಗಳು ಪದವಿ ಮಟ್ಟದ್ದಾಗಿರುತ್ತದೆ.

"ಪ್ರಸ್ತುತ ನಿಯಮಗಳಿಗೊಳಪಟ್ಟಂತೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸುವಿಕೆಯು ಕರ್ನಾಟಕ ಗೆಜೆಟೆಡ್ ಪ್ರೊಬೇಷನರ್ಸ್ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ) ನಿಯಮಗಳು 1997ರ ನಿಯಮ (5) ಮತ್ತು (7)ಅನ್ನು ಯಥಾವತ್ತಾಗಿ ಅನ್ವಯಿಸತಕ್ಕದ್ದು" ಎಂದು ಸದರಿ ನೇಮಕಾತಿ ನಿಯಮಾವಳಿಗಳಲ್ಲಿ ಸೂಚಿಸಿದ್ದು, ಅದರಂತೆ ನಿಯಮ (5) ವಯೋಮಿತಿ ಮತ್ತು ನಿಯಮ (7) ಶೈಕ್ಷಣಿಕ ವಿದ್ಯಾರ್ಹತೆಗೆ ಸಂಬಂಧಪಟ್ಟದ್ದಾಗಿರುತ್ತದೆ.

<u>ಪರೀಕ್ಷೆಯ ಪಠ್ಯಕ್ರಮ</u>

ಪೂರ್ವಭಾವಿ ಮತ್ತು ಮುಖ್ಯ ಪರೀಕ್ಷೆಯ ಕನ್ನಡ ಮತ್ತು ಆಂಗ್ಲಭಾಷೆಯ ವಿವರವಾದ ಪಠ್ಯಕ್ರಮವನ್ನು ಆಯೋಗದ ವೆಬ್ ಸೈಟ್ http://kpsc.kar.nic.in/Syllabus ನಲ್ಲಿ ಬಿತ್ತರಿಸಲಾಗಿದೆ.

<u>ಸೆಕ್ಷನ್ 'ಸಿ' - ವ್ಯಕ್ತಿತ್ವ ಪರೀಕ್ಷೆ:-</u>

ಆಯೋಗವು ನಿಯಮಾನುಸಾರ ನಡೆಸುವ ಮುಖ್ಯ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೇಷ್ಠತೆ ಮತ್ತು ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ನಿಯಮಾನುಸಾರ ಇರುವ ಮೀಸಲಾತಿಯನ್ವಯ ಪ್ರಕಟಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ 1:3ರ ಪ್ರಮಾಣದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳನ್ನು ವ್ಯಕ್ತಿತ್ವ ಪರೀಕ್ಷೆಗೆ ಪರಿಗಣಿಸಲಾಗುವುದು. ವ್ಯಕ್ತಿತ್ವ ಪರೀಕ್ಷೆಗೆ 100 ಅಂಕಗಳನ್ನು ನಿಗದಿಪಡಿಸಲಾಗಿದೆ. ಆಯೋಗವು ವ್ಯಕ್ತಿತ್ವ ಪರೀಕ್ಷೆಯ ಸಮಯದಲ್ಲಿ ಸೇವೆ ಅಥವಾ ಸೇವೆಗಳಿಗೆ ಅಭ್ಯರ್ಥಿಯಾಗಿರುವ ಆತನು/ಆಕೆಯು ವೈಯಕ್ತಿಕವಾಗಿ ಸೂಕ್ತವಾಗಬಲ್ಲನೆ/ಳೆ ಎಂಬುದನ್ನು ನಿರ್ಧರಿಸುತ್ತದೆ, ವ್ಯಕ್ತಿತ್ವ ಪರೀಕ್ಷೆಯ ಸಮಯದಲ್ಲಿ ಅಭ್ಯರ್ಥಿಯ ಬೌದ್ಧಿಕ ತೀಕ್ಷ್ಣತೆ, ಗ್ರಹಿಸಿದ ವಿಷಯಗಳ ಬಗ್ಗೆ ವಿಮರ್ಶಾ ಶಕ್ತಿ, ಸ್ಪಷ್ಟ ಮತ್ತು ತಾರ್ಕಿಕ ವಿಶ್ಲೇಷಣೆ, ಸಮತೋಲನ ತೀರ್ಮಾನ ವಿವಿಧ ವಿಷಯಗಳ ಬಗ್ಗೆ ಆಸಕ್ತಿ ಮತ್ತು ಆಳವಾದ ತಿಳುವಳಿಕೆ, ಸಮರ್ಥನೀಯವಾದ ಸಾಮಾಜಿಕ ಬದ್ಧತೆ, ನಾಯಕತ್ವ ಗುಣ ಮತ್ತು ವೈಚಾರಿಕ ಮನೋಭಾವ ಈ ಅರ್ಹತಾ ಗುಣಗಳನ್ನು ನಿರ್ಧರಿಸಿ ಅಂಕಗಳನ್ನು ನೀಡಲಾಗುತ್ತದೆ.

<u>ವಿಶೇಷ ಸೂಚನೆ:-</u>

1. ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್/ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ.

2. ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಗಳೆರಡರಲ್ಲೂ ಇರುತ್ತವೆ. ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡುವುದು ಹಾಗೂ ಇದೇ ಅಂತಿಮವಾಗಿರುತ್ತದೆ.

| |
|---|
| ಟಿಪ್ಪಣಿ:- ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. |

8. ಮೀಸಲಾತಿ /ಇತರೆ ಪ್ರಮಾಣ ಪತ್ರಗಳು:-

| | | |
|---|---|---|
| 8.1<br>ಜಾತಿ/ಮೀಸಲಾತಿ<br>ಪ್ರಮಾಣ ಪತ್ರಗಳು | (ಅ) | ಜಾತಿ ಮೀಸಲಾತಿ ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 06-03-2020 ರ ಒಳಗೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು. |
| | (ಆ) | ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು :-<br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು — ನಮೂನೆ `ಡಿ'<br>ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು — ನಮೂನೆ `ಇ<br>ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು — ನಮೂನೆ `ಎಫ್' |
| | (ಇ) | ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ. ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು ಅಂದರೆ ದಿನಾಂಕ: 06-03-2015 ರಿಂದ 06-03-2020 ರ ಒಳಗೆ ಜಾರಿಯಾಗಿರಬೇಕು. (Government Notification No SWD 155 BCA 2012 Dt: 17-02-2012 ರನ್ವಯ) |
| | (ಈ) | ಪ.ಜಾ/ಪ.ಪಂ/ಪ್ರ.1 ರ ಅಭ್ಯರ್ಥಿಗಳು ಪಡೆದಿರುವ/ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆವಿಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು (ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011 ದಿನಾಂಕ 22-02-2012) |

| | | |
|---|---|---|
| 8.2<br>ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಾತಿ | (ಅ) | ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. |
| | (ಆ) | ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನುಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು ಅಂದರೆ, ದಿನಾಂಕ: 06-03-2019 ರಿಂದ 03-03-2020 ರ ಒಳಗೆ ಜಾರಿಯಾಗಿರಬೇಕು. |
| | (ಇ) | ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| | (ಈ) | ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಅಸಿಂಧುವಾದಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ. |
| 8.3<br>ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | (ಅ) | ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. |
| 8.4<br>ಮಾಜಿ ಸೈನಿಕರಿಗೆ ಮೀಸಲಾತಿ | (ಅ) | (1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯುರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು |

| | | |
|---|---|---|
| | | (ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ)ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ<br>ಅಥವಾ<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ಧಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.<br>(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.<br>(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು<br><br>ವಿವರಣೆ :- ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ. |
| | (ಆ) | 2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. |

| | | |
|---|---|---|
| | (ಇ) | 3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು(ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) /ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು. |
| | (ಈ) | ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರದ ನಮೂನೆಯನ್ನು ಅನುಬಂಧ-2ರಲ್ಲಿ ತೋರಿಸಲಾಗಿದೆ. |
| 8.5<br>ಅಂಗವಿಕಲ ಅಭ್ಯರ್ಥಿ | | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್‌ಆರ್‌ಆರ್ 2000 ದಿನಾಂಕ 03-09-2005 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 3 ರಷ್ಟು ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ದಿನಾಂಕ 19-11-2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಈ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅನುಬಂಧ-2ರಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು / ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.<br>ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 74 ಸೇನೆನಿ 2006 ದಿನಾಂಕ 30-10-2007 ರಲ್ಲಿ ನಿಗದಿಪಡಿಸಿದಂತೆ ಅಂಧ/ದೃಷ್ಟಿ ಮಾಂದ್ಯ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯು ಆಯೋಗವು ಪರೀಕ್ಷಾ ಪೂರ್ವ ಅಥವಾ ನಂತರದಲ್ಲಿ ನಡೆಸುವ ವೈದ್ಯಕೀಯ ಪರೀಕ್ಷೆಯ ವರದಿಗೆ ಬದ್ಧವಾಗಿದೆ. |
| 8.6<br>ಸೇವಾನಿರತ ಅಭ್ಯರ್ಥಿ | (ಅ) | ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 5(4)ರನ್ವಯ "ಯಾರೇ ಅರ್ಜಿದಾರನು ತಾನು ಅರ್ಜಿ ಸಲ್ಲಿಸುವ ಸಮಯದಲ್ಲಿ ಸರ್ಕಾರದ ಯಾವುದೇ ಇತರೆ ಇಲಾಖೆಯಲ್ಲಿ ಅಥವಾ ಯಾವುದೇ ಇತರ ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಈ ಸಂಬಂಧವಾಗಿ ಸರ್ಕಾರವು ನಿರ್ದಿಷ್ಟಪಡಿಸಿದ ಯಾವುದೇ ಇತರ ಪ್ರಾಧಿಕಾರದಲ್ಲಿ ಖಾಯಂ ಅಥವಾ ತಾತ್ಕಾಲಿಕ ನೌಕರಿಯಲ್ಲಿದ್ದರೆ ಮತ್ತು ಆತನು ಯಾರ ಅಧೀನದಲ್ಲಿ ಉದ್ಯೋಗದಲ್ಲಿರುವನೋ |

| | | |
|---|---|---|
| | | ಆ ಇಲಾಖಾ ಮುಖ್ಯಸ್ಥರಿಂದ ಅಥವಾ ಸಂದರ್ಭಾನುಸಾರ ಸರ್ಕಾರದಿಂದ ಅಥವಾ ಪ್ರಾಧಿಕಾರದಿಂದ ಒಪ್ಪಿಗೆ ಪಡೆಯದೆಯೇ ಅರ್ಜಿಯನ್ನು ಸಲ್ಲಿಸಿದ್ದರೆ ಆತನು ಸರ್ಕಾರದ ಯಾವುದೇ ಇಲಾಖೆಯಲ್ಲಿನ ಹುದ್ದೆಯ ನೇಮಕಕ್ಕೆ ಅರ್ಹನಾಗಿರತಕ್ಕದ್ದಲ್ಲ. ಪರಂತು, ಈ ಉಪ ನಿಯಮವು ಸರ್ಕಾರದ ಯಾವುದೇ ಇಲಾಖೆಯಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ನೇಮಕಗೊಂಡಿರುವ ವ್ಯಕ್ತಿಗೆ ಅವನನ್ನು ಎಲ್ಲಿಯವರೆಗೆ ಹಾಗೆಂದು ಪರಿಗಣಿಸಲಾಗುವುದೋ ಅಲ್ಲಿಯವರೆಗೆ ಅನ್ವಯವಾಗತಕ್ಕದ್ದಲ್ಲ". |
| | (ಅ) | ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮುನ್ನ ಅನುಮತಿಯನ್ನು ಅಂದರೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (NOC) ಕಡ್ಡಾಯವಾಗಿ ಅವರುಗಳ ನೇಮಕಾತಿ ಪ್ರಾಧಿಕಾರಿಗಳ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. |
| | (ಇ) | ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ದಿನಾಂಕವನ್ನು ಅರ್ಜಿಯಲ್ಲಿ ನಮೂದಿಸಿ ಅರ್ಜಿಯೊಂದಿಗೆ ಅಪ್ಲೋಡ್ ಮಾಡತಕ್ಕದ್ದು, ಹಾಗೂ ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಇದೇ ನಿರಾಕ್ಷೇಪಣಾ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು. |

ವಿಶೇಷ ಸೂಚನೆಗಳು :-

1) ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 06-03-2020ರ ಒಳಗೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು, ತಪ್ಪಿದ್ದಲ್ಲಿ ಅಂತವರ ಮೀಸಲಾತಿಯನ್ನು ಪರಿಗಣಿಸಲಾಗುವುದಿಲ್ಲ
2) ಕೊನೆಯ ದಿನಾಂಕದ ನಂತರ ಪಡೆದ ಎಲ್ಲಾ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.
3) ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಸದರಿ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು.
4) ಮೇಲ್ಕಂಡ ಎಲ್ಲಾ ಪ್ರಮಾಣ ಪತ್ರಗಳ ನಮೂನೆಗಳನ್ನು ಅನುಬಂಧ-2ರಲ್ಲಿ ತೋರಿಸಲಾಗಿದೆ.
5) ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

9. ಆಯೋಗದೊಡನೆ ಪತ್ರ ವ್ಯವಹಾರ:-

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರವಹಿಸತಕ್ಕದ್ದು. ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳು ಒದಗಿಸತಕ್ಕದ್ದು:-

(i) ಹುದ್ದೆಯ / ವಿಷಯದ ಹೆಸರು

(ii) ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ-ಮೇಲ್ ಐಡಿ

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

10. ಪ್ರಾಮುಖ್ಯವಾದ ಸೂಚನೆಗಳು:

| |
|---|
| ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಮೂಲ ದಾಖಲಾತಿ ಪರಿಶೀಲನೆ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. |
| 1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪದವಿಯ ಘಟಿಕೋತ್ಸವ ಪ್ರಮಾಣ ಪತ್ರ. |
| 2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ /ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of cumulative record). |
| 3) ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಪೂರ್ಣವಾಗಿ) (Discharge certificate) ಮತ್ತು ಪೆನ್ಷನ್ ಪಡೆಯುತ್ತಿರುವ ದಾಖಲೆಯ ಪ್ರತಿ/ ಮಾಜಿ ಸೈನಿಕರ ಅವಲಂಬಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ (Dependant certificate) (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ). |
| 4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮಿಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.(ಮೀಸಲಾತಿ ಕೋರಿದ್ದಲ್ಲಿ) |
| 5) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ / ಇತರೆ ಅಭ್ಯರ್ಥಿಗಳು ನಮೂನೆ- 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ) |
| 6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) |
| 7) ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ) |
| 8) ಸೇವೆಯಲ್ಲಿರುವ ಅಭ್ಯರ್ಥಿಗಳು ನಿರಾಕ್ಷೇಪಣಾ (NOC) ಪ್ರಮಾಣ ಪತ್ರ |

| | |
|---|---|
| 9) | ಫೋಟೋ ಮತ್ತು ಸಹಿಯನ್ನು /ದಾಖಲೆಗಳನ್ನು ಅಪ್‌ಲೋಡ್ ಮಾಡದೇ ಇರುವ ಅಪೂರ್ಣವಾಗಿರುವ ದಾಖಲೆಗಳನ್ನು ಅಪ್‌ಲೋಡ್ ಮಾಡಿರುವ ಹಾಗೂ ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 10) | ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. |
| 11) | ಅಭ್ಯರ್ಥಿಗಳು ತಮ್ಮ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯಲು ಅರ್ಹರೆ ಎಂಬುದನ್ನು ಆಯೋಗವು ಪರಿಶೀಲಿಸಿ ಮೇಲ್ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಪ್ರವೇಶಪತ್ರಗಳನ್ನು ಆನ್‌ಲೈನ್ ಮುಖಾಂತರ ಡೌನ್‌ಲೋಡ್ ಮಾಡಿಕೊಳ್ಳಲು ಅನುಮತಿಸಲಾಗುವುದು. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯೋಗವು ನಡೆಸುವ ಯಾವುದೇ ನೇಮಕಾತಿ/ ಪರೀಕ್ಷೆಗಳಿಂದ 03 ವರ್ಷಕ್ಕೆ ಡಿಬಾರ್ ಮಾಡಲಾಗುವುದು. ಆದುದರಿಂದ, ಅರ್ಜಿ ಸಲ್ಲಿಸುವ ಮುನ್ನ ಅವರು ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ದೃಢೀಕರಣ ನೀಡುವಾಗ ಎಚ್ಚರ ವಹಿಸಬೇಕು. |

11. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:

| | | |
|---|---|---|
| ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ | : | 080-30574957/ 30574901 |
| ಪರೀಕ್ಷಾ ಶಾಖೆ(1) | : | 080-30574935 |
| ಸಹಾಯವಾಣಿ ಸಂಖ್ಯೆ | : | 7406086807 / 7406086801 |

12. ದುರ್ನಡತೆ:-

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಸಂದರ್ಶನದಿಂದ /ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

(ಜಿ.ಸತ್ಯವತಿ)
ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

## ಅನುಬಂಧ-1

### ಅಭ್ಯರ್ಥಿಗಳಿಗೆ ಆನ್ ಲೈನ್ ಅರ್ಜಿ ಭರ್ತಿ ಮಾಡುವ ಬಗ್ಗೆ ಸೂಚನೆಗಳು

ಆನ್-ಲೈನ್‌ನಲ್ಲಿ ಅರ್ಜಿ ಭರ್ತಿ ಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ. ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿಯಾಗಲಿ ನ್ಯೂನ್ಯತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು ಅಭ್ಯರ್ಥಿಗಳು ನೀಡಿರುವ ಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, ಅವರ 'Profile creation/ರುಜುವಾತುಗಳು ಸೃಷ್ಟಿಸುವ ' ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತ ಹಂತವಾಗಿ ಓದಿಕೊಳ್ಳತಕ್ಕದ್ದು. ಎಲ್ಲಾ ಸೂಚನೆಗಳನ್ನು ಓದಿದ ನಂತರವೇ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

--------

1. ಅಭ್ಯರ್ಥಿಗಳು KPSC ಅಂತರ್ಜಾಲದ ಮುಖಾಂತರವೇ ಅರ್ಜಿಗಳನ್ನು ಆನ್ ಲೈನ್ ಮೂಲಕ ಸಲ್ಲಿಸಬೇಕು. ಇತರೆ ಯಾವುದೇ ಮಾದರಿಯಲ್ಲಿ/ಮೂಲದ ಮುಖಾಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
2. ಅಭ್ಯರ್ಥಿಗಳು ಮೊದಲು KPSC ಅಂತರ್ಜಾಲ "http:://kpsc.kar.nic.in" ರಲ್ಲಿ "New User? Register Here link." ಅನ್ನು ಒತ್ತಿ ನೋಂದಣಿ ಮಾಡಿಕೊಳ್ಳಬೇಕು.
3. ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಲು ಹಾಗೂ login ರುಜುವಾತುಗಳಿಗೆ ಅನನ್ಯವಾದ (unique) ಇ- ಮೇಲ್ ವಿಳಾಸ ಮತ್ತು ಮೊಬೈಲ್ ಸಂಖ್ಯೆಯನ್ನು ಹೊಂದಿರತಕ್ಕದ್ದು.
4. login ರುಜುವಾತುಗಳನ್ನು ಸೃಷ್ಟಿಸಿದ ನಂತರ ಅಭ್ಯರ್ಥಿಗಳು ಈ ರುಜುವಾತುಗಳೊಂದಿಗೆ login ಆಗಿ Profile Creation Link ಅನ್ನು ಒತ್ತಿ ಅವರ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಬೇಕು. ಈ Profile ಅನ್ನು ಅಭ್ಯರ್ಥಿಗಳು ಒಂದು ಬಾರಿ ಭರ್ತಿ ಮಾಡಿದಲ್ಲಿ ಆಯೋಗದ ಮುಂದಿನ ಎಲ್ಲಾ ಅಧಿಸೂಚನೆಗಳಿಗೆ ಉಪಯೋಗವಾಗುತ್ತದೆ. ಅಭ್ಯರ್ಥಿಗಳು ಈ ಮಾಹಿತಿಯನ್ನು ಅಪ್ ಡೇಟ್ ಮಾಡಬಹುದು.
5. ಅಭ್ಯರ್ಥಿಗಳು Profile ರಲ್ಲಿ ಕೋರಲಾದ ಎಲ್ಲಾ ಮಾಹಿತಿಯನ್ನು ಜಾಗರೂಕತೆಯಿಂದ ಭರ್ತಿ ಮಾಡಿ SAVE ಬಟನ್ ಒತ್ತಿ SAVE ಮಾಡಿಕೊಳ್ಳಬೇಕು.
6. ಅಭ್ಯರ್ಥಿ ತನ್ನ ಇತ್ತೀಚಿನ ಭಾವಚಿತ್ರ ಮತ್ತು ಸಹಿ ಗುರುತನ್ನು ಅಪ್ಲೋಡ್ ಮಾಡಬೇಕು.

- ಭಾವಚಿತ್ರದ ಅಳತೆ(ಪಾಸ್ ಪೋರ್ಟ್ ಅಳತೆ) (ಗರಿಷ್ಠ ಅಳತೆ: 50 KB)
- ಸಹಿಯ ಅಳತೆ (ಗರಿಷ್ಠ ಅಳತೆ: 50 KB)

7. ರುಜುವಾತುಗಳೊಂದಿಗೆ login ಆದ ನಂತರ ಅಭ್ಯರ್ಥಿಯು ಚಾಲ್ತಿಯಲ್ಲಿರುವ ಅಧಿಸೂಚನೆಗಳನ್ನು Online Application Link.ರಲ್ಲಿ ನೋಡಬಹುದು. login. ಆದ ನಂತರ ಚಾಲ್ತಿಯಲ್ಲಿರುವ ಅಧಿಸೂಚನೆಗಳ ಪಕ್ಕದಲ್ಲಿ Click Here to apply link ಲಭ್ಯವಿದೆ.
8. ಅಭ್ಯರ್ಥಿಯು ಅಧಿಸೂಚನೆಗೆ ಅನುಗುಣವಾಗಿ ಅರ್ಜಿ ಸಲ್ಲಿಸಲು Click Here to apply link ಅನ್ನು ಒತ್ತಬೇಕು.
9. Click Here to apply link ಅನ್ನು ಒತ್ತಿದಲ್ಲಿ ಅಧಿಸೂಚನೆಯಲ್ಲಿನ ಹುದ್ದೆಗಳಿಗೆ ಅಭ್ಯರ್ಥಿಯ ಅರ್ಹತೆಯನ್ನು ಉಪಕರಣವು ಪರಿಶೀಲಿಸುತ್ತದೆ. ಅಭ್ಯರ್ಥಿ ಅರ್ಹತಾ ಷರತ್ತುಗಳನ್ನು ಪೂರೈಸದಿದ್ದಲ್ಲಿ ಸೂಕ್ತ ಸಂದೇಶವನ್ನು ಸಿಸ್ಟಮ್ ಪ್ರಕಟಿಸುತ್ತದೆ.

10. ಅರ್ಹತಾ ಷರತ್ತುಗಳನ್ನು ಪೂರೈಸುವ ಅಭ್ಯರ್ಥಿಯ ಅರ್ಜಿಯನ್ನು ಮಾತ್ರ ಸಿಸ್ಟಮ್ಸ್ ನಿಂದ ಸ್ವೀಕರಿಸಲ್ಪಡುತ್ತದೆ.

11. ಅರ್ಜಿಯನ್ನು ಅಂತಿಮವಾಗಿ ಸಲ್ಲಿಸಿದ ನಂತರ ಯಾವುದೇ ತಿದ್ದುಪಡಿಗಳನ್ನು ಮಾಡಲು ಅವಕಾಶ ಇಲ್ಲದ ಪ್ರಯುಕ್ತ ಅಭ್ಯರ್ಥಿಗಳು ಅಂತಿಮವಾಗಿ ಅರ್ಜಿಯನ್ನು ಸಲ್ಲಿಸುವ ಮುನ್ನ ಎಲ್ಲ ಅಗತ್ಯ ವಿವರಗಳನ್ನು ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಬೇಕು.

12. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

13. ಪರೀಕ್ಷಾ ಶುಲ್ಕವನ್ನು ಈ ಕೆಳಕಂಡ ಮಾದರಿಯಲ್ಲಿ ಪಾವತಿಸಬಹುದು:

- ನೆಟ್ ಬ್ಯಾಂಕಿಂಗ್
- ಡೆಬಿಟ್ ಕಾರ್ಡ್
- ಕ್ರೆಡಿಟ್ ಕಾರ್ಡ್
- ಸಿ.ಎಸ್.ಸಿ (ಕಾಮನ್ ಸರ್ವೀಸ್ ಸೆಂಟರ್ )

14. ಶುಲ್ಕ ಪಾವತಿಸಲು ಅಭ್ಯರ್ಥಿಗಳು ಈ ಕೆಳಕಂಡ ಪದ್ಧತಿಯನ್ನು ಪಾಲಿಸಬೇಕು:-

- Login ಆದ ನಂತರ ಎಡ ಭಾಗದಲ್ಲಿ My Account link ಲಭ್ಯವಿದ್ದು ಈ My Account link ಅನ್ನು ಒತ್ತಬೇಕು.
- ಅಭ್ಯರ್ಥಿಯು ವಿವಿಧ ಅಧಿಸೂಚನೆಗಳಿಗೆ ಸಲ್ಲಿಸಿದ ಅರ್ಜಿಗಳ ಹಾಗೂ ಶುಲ್ಕ ಪಾವತಿಸಿದ ವಿವರವನ್ನು ನೋಡಬಹುದು. ಶುಲ್ಕ ವಿವರಗಳಲ್ಲಿ Unpaid ಎಂದು ನಮೂದಿಸಿರುವ ಅರ್ಜಿಗಳ ಎದುರು Pay Now link ಲಭ್ಯವಿರುತ್ತದೆ.
- Pay Now link ಅನ್ನು ಒತ್ತಿದಲ್ಲಿ ಮೂರು ಆಯ್ಕೆಗಳು ಲಭ್ಯವಾಗುತ್ತದೆ: (ಎ) ನೆಟ್ ಬ್ಯಾಂಕಿಂಗ್ (ಬಿ) ಡೆಬಿಟ್ ಕಾರ್ಡ್ (ಸಿ)ಕ್ರೆಡಿಟ್ ಕಾರ್ಡ್
- ಆನ್ ಲೈನ್ ಪಾವತಿಯ ಮಾದರಿಯಲ್ಲಿ ಅಭ್ಯರ್ಥಿಯು ನೆಟ್ ಬ್ಯಾಂಕಿಂಗ್.
- ಡೆಬಿಟ್ ಕಾರ್ಡ್ ಮತ್ತು ಕ್ರೆಡಿಟ್ ಕಾರ್ಡ್ ಮುಖಾಂತರ ಶುಲ್ಕ ಪಾವತಿಸಬಹುದು.

<u>ಅನುಬಂಧ–2</u>

(ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

<u>ನಮೂನೆ–ಡಿ</u>

(ನಿಯಮ 3ಎ (2) (3) ನೋಡಿ)
ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ
ಪ್ರಮಾಣ ಪತ್ರ

.......................................................... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ ................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .................................. ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

☐ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
☐ ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

☐ ಸಂವಿಧಾನ
☐ ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
☐ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
☐ ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
☐ ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
☐ ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
☐ ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ...........................................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ .................................................................. ಜಿಲ್ಲಾ/ವಿಭಾಗದ ........................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.........................................................
ತಹಶೀಲ್ದಾರ್..........................................

ಸ್ಥಳ : ಪದನಾಮ
ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ /ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76–ಎಸ್‌ಸಿಟಿ–1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13–2–74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

---

(ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ–ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

______________________________ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ______________________________ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ____________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ______________ಜಾತಿಯ __________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ: ತಹಶೀಲ್ದಾರ್

ದಿನಾಂಕ : ––––––––––––––ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು
ಜಾತಿ ಪ್ರಮಾಣ ಪತ್ರ

___________________________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ _____________________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ __________________ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಮಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

<u>ಅಥವಾ</u>

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

<u>ಅಥವಾ</u>

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ.6000–12000/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

<u>ಅಥವಾ</u>

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎಂಟು ಲಕ್ಷಮೀರುವುದಿಲ್ಲವೆಂದು;

<u>ಅಥವಾ</u>

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ________________ಇವರು ________________ ಜಾತಿಗೆ ______________________ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ __________________ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ :

ದಿನಾಂಕ:

ತಹಶೀಲ್ದಾರ್

-------------ತಾಲ್ಲೂಕು

ಕಛೇರಿಯ ಮೊಹರು

ನಮೂನೆ–1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ
(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು
_________________ತಾಲ್ಲೂಕು
________________ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ___________________________________ ಎಂಬುವವರ ಮಗ / ಮಗಳು / ಪತಿ / ಪತ್ನಿ ___________________________________ ಆದ ನಾನು ಮೇಲುಸ್ತರದಲ್ಲಿ (ಅಡಿಜಚಿಟಥಿ ಐಚಿಥಿಜಡಿ) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :

3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :

   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)

5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)

6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ

8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ?

10. ಸಂಪತ್ತು ತೆರಿಗೆ ಪಾವತಿದಾರರೇ?

11. ಮಾರಾಟ ತೆರಿಗೆ ಪಾವತಿದಾರರೇ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗುರುತ್ತೇನೆ

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ______________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ______________________ ಎಂಬುವವರು ಕರ್ನಾಟಕ ರಾಜ್ಯದ __________ಜಿಲ್ಲೆಯ ವಿಭಾಗ ____________________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ______________________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (ಅಡಿಜಚಿಟಥಿ ಐಚಿಥಿಜಡಿ) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ: ______________ತಾಲ್ಲೂಕು

ಕಛೇರಿಯ ಮೊಹರು

| |
|---|
| ಸೂಚನೆ–1 : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ. |
| ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (ಅಡಿಜಚಿಟಥಿ ಐಚಿಥಿಜಡಿ) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು |

<u>ನಮೂನೆ–2</u>

<u>ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ</u>

ಶ್ರೀ/ಶ್ರೀಮತಿ ______________________________________________ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ_______________________ ಜಿಲ್ಲೆ _______________ ತಾಲ್ಲೂಕು___________ ಗ್ರಾಮದಲ್ಲಿ _____________ ವಾಸವಾಗಿರುವ ಇವರು ಒಂದನೇ ತರಗತಿಯಿಂದ ___________ ತರಗತಿಯವರೆಗೆ _____________ ಜಿಲ್ಲೆ _______________ ತಾಲ್ಲೂಕು_________ ಪಟ್ಟಣ________ ಶಾಲೆಯಲ್ಲಿ ವ್ಯಾಸಂಗ ಮಾಡಿ______ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಮೇಲು ರುಜು | ಸಹಿ
ಕ್ಷೇತ್ರ ಶಿಕ್ಷಣ ಅಧಿಕಾರಿ | ಮುಖ್ಯೋಪಾಧ್ಯಾಯರ ಸಹಿ
ಕಛೇರಿಯ ಮೊಹರು | ಮತ್ತು ಸಂಸ್ಥೆಯ ಮೊಹರು

ಸ್ಥಳ :
ದಿನಾಂಕ:

---

<u>ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ</u>

ಶ್ರೀ/ಶ್ರೀಮತಿ_________________ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ______________________ ಜಿಲ್ಲೆ __________________ತಾಲ್ಲೂಕು _______________ಗ್ರಾಮದಲ್ಲಿ ವಾಸವಾಗಿರುವ ಇವರು ________ನೇ ತರಗತಿಯಿಂದ ____________ನೇ ತರಗತಿಯವರೆಗೆ ___________ ಶೈಕ್ಷಣಿಕ ವರ್ಷದಿಂದ _________ ಶೈಕ್ಷಣಿಕ ವರ್ಷದವರೆಗೆ __________ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ:

ದಿನಾಂಕ: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

---

<u>ರಾಜ್ಯ ಹಾಗೂ ಕೇಂದ್ರ ಸರ್ಕಾರಿ ನೌಕರರು ಸಲ್ಲಿಸಬೇಕಾದ ನಿರಾಕ್ಷೇಪಣ ಪ್ರಮಾಣ ಪತ್ರ</u>

ಶ್ರೀ/ಶ್ರೀಮತಿ...............................................................ಆದ ಇವರು ರಾಜ್ಯ/ಕೇಂದ್ರ ಸರ್ಕಾರದಲ್ಲಿ .............................................(ಪದನಾಮ)..............................................ಇಲಾಖೆಯಲ್ಲಿ ಖಾಯಂ/ತಾತ್ಕಾಲಿಕ ಹುದ್ದೆಯನ್ನು ದಿನಾಂಕ:.............................. ರಿಂದ ..................................ರವರೆಗೆ ಹೊಂದಿರುವವರು. ಇವರು ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯಲ್ಲಿನ---------------- ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡಿದೆ.

ದಿನಾಂಕ:

ಸ್ಥಳ: ನೇಮಕಾತಿ ಪ್ರಾಧಿಕಾರಿಯವರ ಸಹಿ ಮತ್ತು ಮೊಹರು

---

**GOVERNMENT OF KARNATAKA**
**DEPARTMENT OF SAINIK WELFARE AND RESETTLEMENT**
**Office of the Deputy Director Department of Sainik Welfare & Resettlement (Karnataka)**

**No.** **Date:**

**CERTIFICATE**

**This is to certify that Shri/Ssmt/Kum..................................................is an applicant for ...............................in Karnataka is the spouse/son/daughter of No.....................Rank..........**

**Name .......................................................who died/was permanently disabled while in service according to the certificate issued by Defense Authority. He died/was permanently disabled on ....................**

**Home address of the individual at the time of joining Defense Service as per the records is:**

**..................................................................**

**.....................................................................**

**Place:** **Signature of the Deputy Director**
**Date:** **Department of Sainik Welfare & Resettlement**
**District ....................................**

**<u>ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ</u>**

**ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005,**
**ದಿನಾಂಕ 19–11–2005**

## CERTIFICATE FOR THE PERSONS WITH DISABILITIES

**This is to certify that Sri/Smt/Kum . . . . . . . . . . . . . . . . . . . . . . . . . . . . . . . . . . . Son/Wife/Daughter of Shri . . . . . . . . . . . . . . . . . . . . . . . . . . . . . . . . . . . Age . . . . . . old, male/female, Registration No. . . . . . . . . . . is a case of . . . . . . . . . . . . . . . . . . . . . . . . . . . . . . . . . ……. . . .**

**He/She is physically disabled visual disabled speech & hearing disabled and has . . . . & . . . . . . percent) permanent (Physical impairment visual impairment speech & hearing impairment) in relation to his/her . . .. . . . . . . .. . . .**

**Note:**

1. **This condition is progressive/non progressive likely to improve / not likely to improve.**
2. Re-assessment is not recommended / is recommended after a period of . . . . ...... months/years.

*Strike out which is not applicable.

| | | | |
|---|---|---|---|
| **Recent Photograph Showing the disability affixed here.** | **(Sd/-) DOCTOR (Seal)** | **(Sd/-) DOCTOR (Seal)** | **(Sd/-) DOCTOR (Seal)** |

**Countersigned by the**
**Medical Superintendent CMO/Head of Hospital**
**(with seal)**

**Signature/Thumb impression**
**Of the disabled person.**

**Place:**
**Date:**

## GOVERNMENT OF KARNATAKA

No.WCD 231 PHP 2015 Karnataka Government Secretariat,

Vidhana Soudha,
Bangalore, Dated:

## NOTIFICATION

In exercise of the powers conferred under Sub-section (1) of section 32of the Person with Disablities (equal Opportunities, Protection of Rights of Full Pariticipation) Act 1995, the Government of Karnataka hereby identifies the post specified in Col. 3, 4 & 5 of the Schedule below in respect of the category 'A & B' Posts of the disable person in Karnataka State Audit & Accounts Department.

## SCHEDULE-I

| Sl No. | Name of the Department | Blindness or Low vision | Hearing Impairment | Locomotor Disability or Cerebral Palsy |
|---|---|---|---|---|
| (1) | (2) | (3) | (4) | (5) |
| 1. | Karnataka State Audit & Accounts Department | -- | Assistant Controller | Assistant Controller (OA, OL, BL, OAL, BLOA) |
| 2. | Karnataka State Audit & Accounts Department | -- | Audit Officers | Audit Officers (OA, OL, BL) |

By order and in the name of the Governor of Karnataka,

sd/-
Under Secretary to Government,
Department of Personnel & Administrative Reforms (Service Rules-1).